**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಆಳಂದ.**

ಸಿ.ಸಿ.ನಂಃ **242/2014** ಸಿ.ಡಬ್ಲ್ಯೂ –**09** ಪಿ.ಡಬ್ಲ್ಯೂ-**07**

| | | |
|---|---|---|
| ಹೆಸರು | ಃ | ರವೀಂದ್ರನಾಥ |
| ತಂದೆ:ಗಂಡ | ಃ | ರಾಮಣ್ಣಾ |
| ವಯಸ್ಸು | ಃ | **28** ವರ್ಷ |
| ಉದ್ಯೋಗ | : | ಪಿ.ಐ, ಐ.ಜಿ.ಪಿ ಕಚೇರಿ ಕಲಬುರಗಿ |
| ವಾಸಸ್ಥಳ | ಃ | ಕಲಬುರಗಿ |

ದಿನಾಂಕಃ **16.08.2025**

ಸತ್ಯ ಪ್ರತಿಜ್ಞೆಯ ಮೇರೆಗೆ

---

**ಮುಖ್ಯ ವಿಚಾರಣೆ ಮಾನ್ಯ ಸಸಅ ಅವರಿಂದಃ**

ನಾನು ದಿಃ 12-09-2012 ರಿಂದ ದಿಃ 12-02-2014 ರವರೆಗೆ ನಿಂಬರ್ಗಾ ಪೋಲಿಸ್ ಠಾಣೆಯಲ್ಲಿ ಪಿ.ಎಸ್.ಐ ಅಂತಾ ಕಾರ್ಯ ನಿರ್ವಹಿಸಿದ್ದೇನೆ.

ದಿ. 18-10-2013 ರಂದು ಬೆಳಗ್ಗೆ 9.30 ಗಂಟೆಗೆ ನಾನು ಠಾಣಾ ಅಧಿಕಾರಿಯ ಕರ್ತವ್ಯದಲ್ಲಿ ಇದ್ದಾಗ ಚಾಸಾ-1 ರವರು ನೀಡಿದ ಮೌಖಿಕ ಪಿರ್ಯಾಧಿಯನ್ನು ತೆಗೆದುಕೊಂಡು, ಆ ಪಿರ್ಯಾಧಿಯನ್ನು ಪಡೆದುಕೊಂಡು ಅದರ ಆಧಾರದ ಮೇಲೆ ಠಾಣಾ ಗುನ್ಹಾ ಸಂಖ್ಯೆ 105/2013 ನ್ನು ತಯಾರಿಸಿ ಪ್ರ.ವ.ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ನಮ್ಮ ಸಿಬ್ಬಂದಿಯ ಮುಖಾಂತರ ಕಳುಹಿಸಿಕೊಟ್ಟಿರುತ್ತೇನೆ. ಅದೇ ದಿನ ಗುನ್ಹಾ ಸ್ಥಳದ ಪಂಚನಾಮೆಯನ್ನು ಚಾಸಾ 2 ಮತ್ತು 3 ರವರ ಸಮಕ್ಷಮದಲ್ಲಿ ಮಧ್ಯಾಹ್ನ 01.00 ರಿಂದ 02.00 ಗಂಟೆಗೆಯವರೆಗೆ ಜರುಗಿಸಿ ಗುನ್ಹಾ ಸ್ಥಳದಿಂದ ಕೋರಿಗೆ ದಿಂಡಿನ ಬಡಿಗೆ ಮತ್ತು ಮೂರು ಹಿಡಿ ಗಾತ್ರದ ಕಲ್ಲುಗಳನ್ನು ಜಪ್ತಿ ಪಡಿಸಿಕೊಂಡಿರುತ್ತೇನೆ ಅದೇ ದಿನ ಸ್ವತ್ತಿನ ಪಟ್ಟಿಯನ್ನು ನ್ಯಾಯಾಲಯಕ್ಕೆ ಕಳುಹಿಸಿ ಅನುಮತಿಯನ್ನು ಪಡೆದುಕೊಂಡಿರುತ್ತೇನೆ. ದಿಃ 21-10-2013 ರಂದು ಆರೋಪಿ ಸಂಖ್ಯೆ 2, 4 ಮತ್ತು 6 ದಸ್ತಗೀರಿ ಮಾಡಿ ದಸ್ತಗೀರಿ ನಿಯಮಾವಳಿ ಪಾಲಿಸಿ ನ್ಯಾಯಾಂಗ ಬಂಧನಕ್ಕೆ ಕಳುಹಿಸಿಕೊಟ್ಟಿರುತ್ತೇನೆ. ದಿಃ 29-10-2013 ರಂದು ಸದರಿ ಇನ್ನುಳಿದ 1, 3, 4 ಮತ್ತು 5 ನೇ ಆರೋಪಿತರನ್ನು ದಸ್ತಗೀರಿ ಮಾಡಿ ದಸ್ತಗೀರಿ ನಿಯಮಾವಳಿ ಪಾಲಿಸಿ ನ್ಯಾಯಾಂಗ ಬಂಧನಕ್ಕೆ

ಕಳುಹಿಸಿಕೊಟ್ಟಿರುತ್ತೇನೆ. ಅದೇ ದಿನ ಚಾಸಾ 4 ರಿಂದ 6 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ, ದಿಃ 19-11-2013 ರಂದು ಚಾಸಾ 4 ರವರ ಗಾಯದ ಪ್ರಮಾಣ ಪತ್ರವನ್ನು ಪಡೆದುಕೊಂಡು ನಂತರ ದಿಃ 21-11-2013 ರಂದು ಚಾಸಾ 1 ರವರ ಗಾಯದ ಪ್ರಮಾಣ ಪತ್ರವನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ತನಿಖೆ ಪೂರ್ಣಗೊಂಡ ಕಾರಣ ದಿಃ 28-11-2013 ರಂದು ಆರೋಪಿತರ ವಿರುದ್ದ ನ್ಯಾಯಾಲಯಕ್ಕೆ ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ.

ಸಾಕ್ಷಿಯು ನಿಪಿ. 1 ರಲ್ಲಿ ಇರುವ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 1 ಬಿ ಎಂದು ಗುರುತಿಸಲಾಯಿತು. ಸಾಕ್ಷಿಯು ಪ್ರ.ವ.ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 6 ಎಂದು ಗುರುತಿಸಲಾಯಿತು. ಸಾಕ್ಷಿಯ ಸಹಿಯನ್ನು ನಿಪಿ. 6-ಎ ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ. 2 ರಲ್ಲಿ ಇರುವ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 2 ಬಿ ಎಂದು ಗುರುತಿಸಲಾಯಿತು. ಸಾಕ್ಷಿಯು ಈಗಾಗಲೇ ಗುರುತಿಸಲಾದ ಮು.ಮಾ.1 ರಿಂದ 4 ನ್ನು ನೋಡಿ ಗುರುತಿಸುತ್ತಾರೆ. ಸಾಕ್ಷಿಯು ನಿಪಿ. 4 ರಲ್ಲಿ ಇರುವ ಅವರ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 4 ಬಿ ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ. 5 ರಲ್ಲಿ ಇರುವ ಅವರ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 5 ಬಿ ಎಂದು ಗುರುತಿಸಲಾಯಿತು.

**ಪಾಟೀ ಸವಾಲು ಆರೋಪಿತರ ಪರ ವಕೀಲರಿಂದಃ ಪಾಟೀ ಸವಾಲಿಗೆ ಸಮಯಾವಕಾಶ ಕೇಳಿರುತ್ತಾರೆ ನೀಡಲಾಯಿತು.**

ಓ.ಹೇ.ಕೇ.ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಆಳಂದ.